ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ರಾಜ್ಯದಲ್ಲಿರುವ ನಮೂನೆ 50,53 ಮತ್ತು 57ರಲ್ಲಿ ಸಲ್ಲಿಕೆಯಾದ ಅರ್ಜಿಯ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

173 (249) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅಕ್ರಮ ಸಕ್ರಮ ಯೋಜನೆಯಲ್ಲಿ ನಮೂನೆ 50,53 ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು; ಹಕ್ಕುಪತ್ರ ಪತ್ರ ನೀಡಿದ ಪ್ರಕರಣಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ವಿಚಾರಣೆಯ ಹಂತದಲ್ಲಿರುವ ಮತ್ತು ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ನಮೂನೆವಾರು ಮಾಹಿತಿಯನ್ನು ನೀಡುವುದು)

(ಆ) ರಾಜ್ಯದಲ್ಲಿ ನಮೂನೆ 57 ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಶಾಸನಬದ್ದವಾಗಿ 16/05/2019 ವರೆಗೂ ಅರ್ಜಿಯನ್ನು ಸಲ್ಲಿಸಲು ಅವಕಾಶ ಇದ್ದರೂ ಮತ್ತು ರೈತರು ಅರ್ಜಿಯನ್ನು ಸಲ್ಲಿಸಲು ಬಂದರೂ ಮತ್ತು ಅಂಚೆ ಮೂಲಕ ಸಲ್ಲಿಸಿದರೂ ಉಡುಪಿ ಜಿಲ್ಲೆಯಲ್ಲಿ ಚುನಾವಣೆ ಕಾರಣ ನೀಡಿ 8 ದಿನಗಳು ಬಾಕಿಯಿರುವಾಗಲೇ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವಕಾಶವಂಚಿತರಾದ ರೈತರಿಗೆ ಮತ್ತೊಮ್ಮೆ ಅವಕಾಶ ನೀಡಲು ಸರಕಾರ ಕೈಗೊಂಡ ಕ್ರಮವೇನು ;

(ಇ) ಅಕ್ರಮ ಸಕ್ರಮ ಯೋಜನೆಯಲ್ಲಿ ಅರ್ಜಿ ಸಲ್ಲಿಸಿದ ರೈತರು ನೈಜ ಕೃಷಿಯ ಗದ್ದೆ ತೋಟವನ್ನು ಹೊಂದಿದ್ದರೂ ಸಹ ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿದೆ ಎನ್ನುವ ಕಾರಣ ನೀಡಿ ಹಕ್ಕುಪತ್ರವನ್ನು ನೀಡದಿರುವುದರಿಂದ ರೈತರು ಮೂರು ದಶಕಗಳಿಂದ ಶೋಷಣೆಗೆ ಒಳಗಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿರುತ್ತದೆಯೇ; ಭೂ ಸ್ವಾಧೀನತೆಯನ್ನು ಹೊಂದಿ ಕೃಷಿಯನ್ನು ಮಾಡುತ್ತಿರುವ ರೈತರಿಗೆ ಸದರಿ ಭೂಮಿಯನ್ನು ಮಂಜೂರಾತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?